# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಾಸರಹಳ್ಳಿ ವಲಯ, ಹೆಗ್ಗನಹಳ್ಳಿ ಉಪವಿಭಾಗ

### ವಾರ್ಡ್ ನಂ.71 : ಹೆಗ್ಗನಹಳ್ಳಿ

**ದಿನಾಂಕ: 11.11.2021 ರಂದು ಬೆಳಿಗ್ಗೆ 11.00 ಗಂಟೆಗೆ ಶ್ರೀ ಬಿ.ಆರ್.ರವಿಕುಮಾರ್, ನೋಡಲ್ ಅಧಿಕಾರಿ, ವಾರ್ಡ್ 71 ರವರ ಅಧ್ಯಕ್ಷತೆಯಲ್ಲಿ ಸಹಾಯಕ ಕಾರ್ಯಪಾಲಕ ಅಭಿಯಂತರರು, ಹೆಗ್ಗನಹಳ್ಳಿ ಉಪವಿಭಾಗ ಕಛೇರಿಯಲ್ಲಿ ನಡೆದ ಸಭೆಯ ನಡಾವಳಿಗಳು:**

**ಸಭೆಯಲ್ಲಿ ಹಾಜರಿದ್ದವರು:**

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ಬಿ.ಆರ್.ರವಿಕುಮಾರ್ | ನೋಡಲ್ ಅಧಿಕಾರಿ–ವಾರ್ಡ್ ನಂ.71 |
| 2 | ಶ್ರೀ ಅವೀಶ್ ಹೆಚ್ ಎಂ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಹಾಗೂ ಸಂಚಾಲಕರು–ವಾರ್ಡ್ 71 |
| 3 | ಶ್ರೀ ಡಾ.ಅಂಬರೀಶ್ | ಕೋವಿಡ್ ಮೆಡಿಕಲ್ ಆಫೀಸರ್ |
| 4 | ಶ್ರೀ ಬಿ.ಎನ್ ರಂಗನಾಥ್ | ಸದಸ್ಯರು |
| 5 | ಶ್ರೀ ಸುರೇಂದ್ರ | ಮಾರ್ಷಲ್ |
| 6 | ಶ್ರೀ ಎಸ್.ಪ್ರವೀಣ್ | ಬೀದಿದೀಪಗಳ ನಿರ್ವಹಣೆಯ ಗುತ್ತಿಗೆದಾರರು |
| 7 | ಶ್ರೀ ಗಂಗರೆಡ್ಡಿ | ಕಂದಾಯ ಪರಿವೀಕ್ಷಕರು |
| 8 | ಶ್ರೀ ಹೆಚ್ ಟಿ ಮುನಿರಾಜು | ಕಂದಾಯ ವಸೂಲಿಗಾರರು |
| 9 | ಶ್ರೀ ಎನ್ ಮುರುಳಿ | ಕಂದಾಯ ವಸೂಲಿಗಾರರು |
| 10 | ಶ್ರೀಮತಿ ಅನುಪಮ | ಕಂದಾಯ ವಸೂಲಿಗಾರರು |
| 11 | ಶ್ರೀ ಕಮಲಪ್ಪ | ಕಿರಿಯ ಆರೋಗ್ಯ ಪರಿವೀಕ್ಷಕರು–ವಾರ್ಡ್ 71 |

**:ನಡಾವಳಿಯ ವರದಿ:**

- ಕಾರ್ಯದರ್ಶಿಗಳಾದ ಶ್ರೀ ಅವೀಶ್ ಹೆಚ್ ಎಂ ಮಾತನಾಡುತ್ತಾ ಸಭೆಗೆ ಹಾಜರಾದ ನೋಡಲ್ ಅಧಿಕಾರಿ ಹಾಗೂ ಪಾಲಿಕೆಯ ಅಧಿಕಾರಿಗಳು/ನೌಕರರಿಗೆ ಸ್ವಾಗತ ಕೋರಿದರು.

**ವಿಷಯ ಸಂಖ್ಯೆ: 1:– ಹೋಮ್ ಗಾರ್ಡ್‌ಗಳ ನಿಯೋಜನೆ ಬಗ್ಗೆ**

ನೋಡಲ್ ಅಧಿಕಾರಿ ರವರು ಮಾತನಾಡಿ ವಾರ್ಡ್ ನಂ.71ಕ್ಕೆ 5 ಸಂಖ್ಯೆಯ Home Guard ಗಳನ್ನು ನಿಯೋಜನೆ ಮಾಡಿದ್ದು, ಇವರನ್ನು ಮಳೆಯ ಸಮಯದಲ್ಲಿ ಬಳಸಿಕೊಳ್ಳಲು ಸೂಚಿಸಿದರು.

* <u>ವಿಷಯ ಸಂಖ್ಯೆ:2 :– </u>**ಅನಧಿಕೃತ ಕಟ್ಟಡಗಳಿಗೆ ನೋಟೀಸ್ ಜಾರಿ ಮಾಡುವ ಬಗ್ಗೆ:**

ನೋಡಲ್ ಅಧಿಕಾರಿಗಳು ಮಾತನಾಡಿ, ಮಾನ್ಯ ಉಚ್ಚ ನ್ಯಾಯಾಲಯದ ಆದೇಶದಂತೆ ಅನಧಿಕೃತ ಕಟ್ಟಡಗಳನ್ನು ಸರ್ವೇ ಮಾಡಿ ತಿಳುವಳಿಕೆ ಪತ್ರಗಳನ್ನು ನೀಡಲು ಮಾನ್ಯ ಮುಖ್ಯ ಆಯುಕ್ತರು, ಬಿಬಿಎಂಪಿರವರು ಆದೇಶ ನೀಡಿದ್ದು, ಅದರಂತೆ ಕಂದಾಯ ಅಧಿಕಾರಗಳ ಸಹಕಾರದೊಂದಿಗೆ ವಾರ್ಡ್ ವ್ಯಾಪ್ತಿಯಲ್ಲಿ ಅನಧಿಕೃತವಾಗಿ ನಿರ್ಮಿಸಿರುವ/ ನಿರ್ಮಿಸುತ್ತಿರು Category-1 & 2 ಕಟ್ಟಡಗಳಿಗೆ ನೋಟೀಸ್ ಜಾರಿ ಮಾಡುವಂತೆ ವಾರ್ಡ್‌ನ ಸಹಾಯಕ ಅಭಿಯಂತರರಿಗೆ ತಿಳಿಸಿದರು.

<u>ವಿಷಯ ಸಂಖ್ಯೆ: 3:–</u> **ರಸ್ತೆಗುಂಡಿಗಳ ಬಗ್ಗೆ**
ರಸ್ತೆಗುಂಡಿಗಳ ಬಗ್ಗೆ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ಚರ್ಚಿಸಲಾಯಿತು.

ಇದಕ್ಕೆ ಸಹಾಯಕ ಅಭಿಯಂತರರು ಮಾತನಾಡಿ, ವಾರ್ಡ್ 71ರ ವ್ಯಾಪ್ತಿಯ ರಸ್ತೆಗಳಲ್ಲಿ ಬಿದ್ದಿರುವ ರಸ್ತೆಗುಂಡಿಗಳನ್ನು ಪಟ್ಟಿಮಾಡಿಕೊಂಡು, ಹಲವು ಕಡೆಗಳಲ್ಲಿ ವೆಟ್‌ಮಿಕ್‌ಅನ್ನು ಅಳವಡಿಸಲಾಗಿರುತ್ತದೆ. ಆದರೆ ಮಳೆಯು ಬಿಡುವು ಕೊಡದೇ ಸುರಿಯುತ್ತಿದ್ದು, ಮಳೆ ನಿಂತ ನಂತರ ಡಾಂಬರು ಹಾಕಲಾಗುವುದು ಎಂದು ತಿಳಿಸಿದರು.

* <u>ವಿಷಯ ಸಂಖ್ಯೆ:4</u>
  **ಕೋವಿಡ್–19 ಸಾಂಕ್ರಾಮಿಕದ ಬಗ್ಗೆ:–**

ಸಭೆಯಲ್ಲಿ ಹಾಜರಿದ್ದ ಡಾ.ಅಂಬರೀಶ್ ರವರು ಮಾತನಾಡಿ ವಾರ್ಡ್ ನಂ.71ರ ವ್ಯಾಪ್ತಿಯಲ್ಲಿ ದಿನವೂ 200+ ಲಸಿಕಾಕರಣವನ್ನು ಮಾಡಲಾಗುತ್ತಿದೆ. ಹಾಗೂ ದಿನವೂ ಸ್ವಾಬ್ ಟೆಸ್ಟ್‌ಗಳನ್ನು ನಡೆಸಲಾಗುತ್ತಿದ್ದು, ಇತ್ತೀಚಿನ ಯಾವುದೇ ಕೋವಿಡ್–19 ಕೇಸ್‌ಗಳು ವಾರ್ಡ್ ವ್ಯಾಪ್ತಿಯಲ್ಲಿ ಕಂಡುಬಂದಿರುವುದಿಲ್ಲ ಎಂದು ತಿಳಿಸಿದರು.

ಹಾಜರಿದ್ದ ಮಾರ್ಷಲ್ ನವರು ಮಾತನಾಡಿ, ಈ ವಾರ್ಡ್ ವ್ಯಾಪ್ತಿಯಲ್ಲಿ ಎಲ್ಲೆಂದರಲ್ಲಿ ಕಸ ಸುರಿಯುವ 42 ಕೇಸ್‌ಗಳಿಂದ ದಂಡವನ್ನು ಸಂಗ್ರಹಿಸಲಾಗಿದೆ ಎಂದು ತಿಳಿಸಿದರು.

* <u>ವಿಷಯ ಸಂಖ್ಯೆ:5</u>
  **ರಾಜ್ ನ್ಯೂಸ್ ಚಾನೆಲ್‌ನಲ್ಲಿ ವರದಿಯಾಗಿದ್ದ ಸುದ್ದಿಯ ಬಗ್ಗೆ:–**

ಸಭೆಯಲ್ಲಿ ಹಾಜರಿದ್ದ ಕಿರಿಯ ಆರೋಗ್ಯ ಪರಿವೀಕ್ಷಕರಾದ ಶ್ರೀ ಕಮಲಪ್ಪನವರು ಮಾತನಾಡಿ ವಾರ್ಡ್ ನಂ.71ರ ವ್ಯಾಪ್ತಿಯಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರದ ಬಳಿ ಕಸವು ಬಿದ್ದಿರುವುದಾಗಿ ಸ್ಥಳೀಯ ನ್ಯೂಸ್ ಚಾನೆಲ್‌ನಲ್ಲಿ ವರದಿಯಾಗಿದ್ದ ಸುದ್ದಿಯ ಮೇರೆಗೆ ಸ್ಥಳ ಪರಿಶೀಲಿಸಿ ಕಸವನ್ನು ತೆರವುಗೊಳಿಸಲಾಗಿದೆ ಎಂದು ತಿಳಿಸಿದರು.

ಕೊನೆಯದಾಗಿ ಮಾನ್ಯ ನೋಡಲ್ ಅಧಿಕಾರಿರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿ/ನೌಕರರಿಗೆ ಮತ್ತು ಸದಸ್ಯರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆಯೂ ಈ ಸಭೆಗಳಲ್ಲಿ ಪೂರ್ವತಯಾರಿಯೊಂದಿಗೆ ಪಾಲ್ಗೊಂಡು ವಾರ್ಡ್ ನಂ.71ರ ಅಭಿವೃದ್ಧಿಗೆ ಸಹಕಾರ ನೀಡಬೇಕೆಂದು ಮನವಿ ಮಾಡಿದರು.

➢ ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರಾದ ಶ್ರೀ ಅವೀಶ್ ಹೆಚ್.ಎಂ ರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿಗಳು/ನೌಕರರಿಗೂ ಮತ್ತು ಸದಸ್ಯರಿಗೂ ವಂದನೆಯನ್ನು ತಿಳಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಸದಸ್ಯ ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ 71, ಹೆಗ್ಗನಹಳ್ಳಿ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ವಾರ್ಡ್ ಸಮಿತಿ ಅಧ್ಯಕ್ಷರು
ಹಾಗೂ ವಾರ್ಡ್‌ನ ನೋಡಲ್ ಅಧಿಕಾರಿ
ವಾರ್ಡ್ ನಂ.71, ಹೆಗ್ಗನಹಳ್ಳಿ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಪ್ರತಿಯನ್ನು:

1) ಮಾನ್ಯ ಶಾಸಕರು, ದಾಸರಹಳ್ಳಿ ವಿಧಾನಸಭಾ ಕ್ಷೇತ್ರ, ರವರ ಆದ್ಯ ಗಮನಕ್ಕೆ ಕಳುಹಿಸಿದೆ.
2) ಮಾನ್ಯ ವಲಯ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
3) ಜಂಟಿ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
4) ಕಾರ್ಯಪಾಲಕ ಅಭಿಯಂತರರು (ದಾಸರಹಳ್ಳಿ ವಿಭಾಗ) ರವರ ಮಾಹಿತಿಗಾಗಿ ಕಳುಹಿಸಿದೆ.
5) ಸಹಾಯಕ ಕಾರ್ಯಪಾಲಕ ಅಭಿಯಂತರರು (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
6) ಸಹಾಯಕ ಕಂದಾಯ ಅಧಿಕಾರಿ (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
7) ಹಿರಿಯ/ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ.71 ರವರ ಮಾಹಿತಿಗಾಗಿ
8) ವಾರ್ಡ್ ಸಮಿತಿ ಸಭೆಯ ಸದಸ್ಯರಿಗೆ ಮಾಹಿತಿಗಾಗಿ ಕಳುಹಿಸಿದೆ.
9) ಕಛೇರಿ ಕಡತಕ್ಕೆ